


ಕಲೆ: ದರ್ಶನ್ ವಿ.

# ನಮ್ಮ ಕನಸು

ನಾವು ಎಳೆಯರು ನಾವು ಗೆಳೆಯರು
ಹೃದಯ ಹೂವಿನ ಹಂದರ
ನಾಳೆ ನಾವೇ ನಾಡ ಹಿರಿಯರು
ನಮ್ಮ ಕನಸದೊ ಸುಂದರ ||ಪಲ್ಲವಿ||

ಹಿಂದು ಮುಸ್ಲಿಂ ಕ್ರೈಸ್ತರೆಲ್ಲರಿ–
ಗೊಂದೆ ಭಾರತ ಮಂದಿರ
ಶಾಂತಿ ದಾತನು ಗಾಂಧಿ ತಾತನು
ಎದೆಯ ಬಾನಿನ ಚಂದಿರ ||1||

ಜಾತಿ ರೋಗದ ಭೀತಿ ಕಳೆಯುತ
ನೀತಿ ಮಾರ್ಗದಿ ನಡೆವೆವು
ಒಂದೆ ಮಾನವ ಕುಲವು ಎನ್ನುತ
ವಿಶ್ವ ಧರ್ಮವ ಪಡೆವೆವು ||2||

ವೈರ ಮತ್ಸರ ಸ್ವಾರ್ಥ ವಂಚನೆ
ಕ್ರಿಮಿಗಳೆಲ್ಲವ ತೊಡೆವೆವು
ದೇಶ ಸೇವೆಗೆ ದೇಹ ಸವೆಸುವ
ದೀಕ್ಷೆ ಇಂದೇ ತೊಡೆವೆವು ||3||

ನಮ್ಮ ಸುತ್ತಲು ಹೆಣೆದುಕೊಳ್ಳಲಿ
ಸ್ನೇಹ ಪಾಶದ ಬಂಧನ
ಬೆಳಕು ಬೀರಲಿ ಗಂಧ ಹರಡಲಿ
ಉರಿದು ಪ್ರೇಮದ ಚಂದನ ||4||

ನಮ್ಮ ಶಕ್ತಿಗೆ ದಿವ್ಯ ಭಕ್ತಿಗೆ
ದೇಶವಾಗಲಿ ನಂದನ
ಅಂದು ಪ್ರೇಮದಿ ಎತ್ತಿಕೊಳ್ಳಲಿ
ಭೂಮಿ ತನ್ನಯ ಕಂದನ ||5||

**-ಶಂ.ಗು. ಬಿರಾದಾರ**